ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ವಿಭಾಗ
ಜಿ.ಕೆ.ವಿ.ಕೆ., ಬೆಂಗಳೂರು-560065

* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 19.07.2016

ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

ಈ ವಾರದ ಮುನ್ಸೂಚನೆ (ದಿನಾಂಕ 20.07.16–24.07.16 ವರೆಗೆ)

	20.07.16	21.07.16	22.07.16	23.07.16	24.07.16
ಮಳೆ (ಮಿ ಮಿ)	4	7	3	6	8
ಗರಿಷ್ಠ ಉಷ್ಣಾಂಶ(ಡಿ.ಸೆ.)	29	30	29	28	29
ಕನಿಷ್ಠ ಉಷ್ಣಾಂಶ (ಡಿ.ಸೆ.)	19	19	20	20	19
ಮೋಡ (ಪ್ರಮಾಣ)	6	6	7	6	6
ಅರ್ದ್ರತೆ ೭.೨೦ ಬೆ (ಶೇ)	76	78	74	75	78
ಅರ್ದ್ರತೆ ೨.೨೦ ಮ (ಶೇ)	62	63	63	64	65
ಗಾಳಿಯ ವೇಗ (ಕಿ.ಮಿ/ಗಂಟೆಗೆ)	2	2	2	4	5
ಗಾಳಿಯ ದಿಕ್ಕು (ಡಿಗ್ರಿ)	230	320	230	270	320

ಮುಂಬರುವ 5 ದಿನಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆಯಿದೆ . ದಿನದ ಗರಿಷ್ಠ ಉಷ್ಣಾಂಶ **28.0-30.0° ಸೆ** ಮತ್ತು ಕನಿಷ್ಠ **19.0-20.0° ಸೆ** ಇರುವ ಸಾಧ್ಯತೆ ಇದೆ. ಬೆಳಿಗಿನ ಆರ್ದ್ರತೆ ಪ್ರಮಾಣ ಶೇ **74-78 %** ಇದ್ದು ಮಧ್ಯಾಹ್ನ **62-65 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **2-5** ಕಿ.ಮೀ. ವೇಗದಲ್ಲಿ ಬೀಸುವ ಸ0ಭವವಿದೆ.

ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

- ಮುಂಗಾರು ಬಿತ್ತನೆಯನ್ನು ತೇವಾಂಶದ ಆಧಾರದ ಮೇಲೆ ಬಿತ್ತನೆ ಮುಂದುವರಿಸಿ.
- ಆಯಾ ವಲಯ ಪ್ರದೇಶಕ್ಕೆ ಶಿಫಾರಸ್ಸು ಮಾಡಿದ ತಳಿಗಳನ್ನೇ ಬಿತ್ತನೆಗೆ ಬಳಸುವುದು ಸೂಕ್ತ.
- ಈಗಾಗಲೇ ಬಿತ್ತಿನೆಯಾಗಿರುವ ತೊಗರಿ, ನೆಲಗಡಲೆ, ಜೋಳದ ಬೆಳೆಗಳಲ್ಲಿ ಮೇಲು ಗೊಬ್ಬರವನ್ನು ಕೊಡಬೇಕು.
- **ಜುಲೈ-ಆಗಸ್ಟ್ ತಿಂಗಳಲ್ಲಿ ಬಿತ್ತನೆ ಮಾಡಬೇಕಾದ ಬೆಳೆಗಳು(ತೇವಾಂಶದ ಆಧಾರದ ಮೇಲೆ ಬಿತ್ತನೆ ಮಾಡಬೇಕು)**
- ಪೂರ್ವ ಒಣ ಪ್ರದೇಶಗಳಾದ ಬೆಂಗಳೂರು ನಗರ ಮತ್ತು ಗ್ರಾಮೀಣ, ಕೋಲಾರ, ಚಿಕ್ಕಬಳ್ಳಾಪುರ ,ರಾಮನಗರ ಮತ್ತು ತುಮಕೂರಿನ ಕೆಲವು ಭಾಗಗಳಲ್ಲಿ, ಜಿ.ಪಿ.ಯು-28, ಹೆಚ್.ಆರ್.-911 ರಾಗಿ ತಳಿಗಳನ್ನು ಬಿತ್ತನೆ ಮಾಡಬಹುದು. ಸೂರ್ಯಕಾಂತಿ ತಳಿಗಳಾದ ಮಾರ್ಡೆನ್, ಕೆ.ಬಿ.ಎಸ್.ಹೆಚ್-೧, ಕೆ.ಬಿ.ಎಸ್.ಹೆಚ್-೪೧, ಕೆ.ಬಿ.ಎಸ್.ಹೆಚ್-೪೨, ಕೆ.ಬಿ.ಎಸ್.ಹೆಚ್-೪೪, ಕೆ.ಬಿ.ಎಸ್.ಹೆಚ್-೫೩ ತಳಿಗಳನ್ನು ಬಿತ್ತನೆ ಮಾಡಬಹುದು. ಶಕ್ತಿಮಾನ್ ಜೋಳದ ತಳಿಗಳಾದ ಡೆಕ್ಕನ್-೧೦೩, ವಿಜಯ ಕಾಂಪೋಸಿಟ್ ಮತ್ತು ಗಂಗಾ-೧೧ ತಳಿಗಳನ್ನು ಆಯ್ಕೆ ಮಾಡಿಕೊಳ್ಳಬಹುದು. ಇವು ಕೇದಿಗೆ ರೋಗ, ಎಲೆ ಅಂಗಮಾರಿ ರೋಗ, ಕಾಂಡ ಕೊರೆಯುವ ಕೀಟ ನಿರೋದಕ ಶಕ್ತಿ ಹೊಂದಿವೆ. ಸತುವಿನ ಸಲ್ಫೇಟ್‌ನ್ನು ಬಿತ್ತನೆಗೆ ಮುಂಚೆಯೇ ಭೂಮಿಗೆ ಸೇರಿಸಿ. ಅಲಸಂದೆ ಬೆಳೆಯಲ್ಲಿ ಸಿ-೧೫೨ ಮತ್ತು ಕೆ.ಎಮ್-೫, ಅಥವಾ ತರಕಾರಿಗಾಗಿ ಪಿ.ಕೆ.ಬಿ-೪ ತಳಿಯನ್ನು ಆಯ್ಕೆ ಮಾಡಿಕೊಳ್ಳಬಹುದು.
- ಗಾಳಿಯ ವೇಗ ಹೆಚ್ಚಾಗಿರುವುದರಿಂದ ಟೋಮೋಟೊ ಮತ್ತು ಇನ್ನಿತರ ತರಕಾರಿ ಬೆಳೆಗಳಿಗೆ ರಕ್ಷಣೆ ಕೊಡಿ.
- ತೇವಾಂಶದ ಸಂರಕ್ಷಣೆಗಾಗಿ ಮತ್ತು ಇರುವಂತಹ ಕಳೆ ನಿರ್ವಹಣೆಗೋಸ್ಕರ, ಒಂದೆರಡು ಬಾರಿ ಕುಂಟೆ ಹಾಯಿಸುವುದು.
- ಕಿತ್ತಂತಹ ಕಳೆ ಮತ್ತು ಬದುಗಳಲ್ಲಿ ಬೆಳೆದಿರುವ ಗ್ಲಿರೀಸಿಡಿಯ (ಹಸಿರೆಲೆ ಗೊಬ್ಬರದ ಗಿಡ) ಸೊಪ್ಪನ್ನು ಉಪಯೋಗಿಸಿಕೊಂಡು ಸಾಲುಗಳ ಮಧ್ಯದಲ್ಲಿ ಭೂ-ಹೊದಿಕೆಯಾಗಿ ಹರಡುವುದು
- ಈಗಾಗಲೇ ಮೇ ಮತ್ತು ಜೂನ್ ತಿಂಗಳಲ್ಲಿ ಬಿತ್ತನೆ ಮಾಡಿರುವಂತಹ ದೀರ್ಘಾವಧಿ ಬೆಳೆಗಳಾದ ತೊಗರಿ, ಹರಳು ಬಿತ್ತನೆಯಾಗಿದ್ದಲ್ಲಿ ಮೇಲೆ ತಿಳಿಸಿರುವ ಬೇಸಾಯ ಕ್ರಮಗಳ ಜೊತೆಗೆ, ಸಾಲುಗಳ ಮಧ್ಯದಲ್ಲಿರುವ ಮಣ್ಣನ್ನು ಗಿಡದ ಬುಡಕ್ಕೆ ಹಾಕುವುದರಿಂದ ಭೂಮಿಯು ದಿಂಡು ಸಾಲಾಗಿ ಪರಿವರ್ತನೆಯಾಗುತ್ತದೆ ಇದರಿಂದ ಗಿಡಗಳಿಗೆ ಹೆಚ್ಚು ತೇವಾಂಶ ಸಿಗುವಂತಾಗುತ್ತದೆ.
- ಎಲ್ಲೆಲ್ಲಿ ದೀರ್ಘಾವದಿ ಬೆಳೆಗಳು (ತೊಗರಿ ಮತ್ತು ಹರಳು) ಬಿತ್ತನೆ ಮಾಡಿದಲ್ಲಿ ಕಳೆ ನಿರ್ವಹಣೆ, ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ಅಂತರ ಬೇಸಾಯವನ್ನು ಕೈಗೊಳ್ಳುವುದು.

- ಎಲ್ಲೆಲ್ಲಿ ಶಿಫಾರಿಸಿಗಿಂತ ಹೆಚ್ಚು ಗಿಡಗಳ ಸಂಖ್ಯೆ ಇದೆಯೋ ಅಲ್ಲಿ ಬೆಳೆ ಸಸಿಗಳ ಸಂಖ್ಯೆಯನ್ನು ಕಡಿಮೆಗೊಳಿಸುವುದರಿಂದ ಮಣ್ಣಿನ ತೇವಾಂಶದ ಸದ್ಬಳಕೆ ಮಾಡಿಕೊಳ್ಳಬಹುದು.

ಜಾನುವಾರು: ಜಾನುವಾರು, ರೇಷ್ಮೆ ಹಾಗೂ ಕೋಳಿ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು.

- **ಚಪ್ಪೆ ರೋಗ :** ಈ ರೋಗವು ದನ, ಎಮ್ಮೆ, ಕುರಿಗಳಲ್ಲಿ ಹರಡುತ್ತದೆ. ಸಾಮಾನ್ಯವಾಗಿ ಈ ರೊಗವು ಮಳೆಗಾಲದ ಕೊನೆಯಲ್ಲಿ ಕಾಣುತ್ತದೆ. ಚಪ್ಪೆ ರೋಗದ ಲಸಿಕೆಯನ್ನು ಪ್ರತಿ ವರ್ಷವೂ ಜೂನ್/ಜುಲೈ ತಿಂಗಳಲ್ಲಿ ಮಾಡಿಸುವುದು.
- **ನೆರಡಿ ರೋಗ:** ಜ್ವರ, ಕೆಲವೊಮ್ಮೆ ಇದ್ದಕ್ಕಿದ್ದ ಹಾಗೆ ದನಗಳು ಸಾಯುವುದು, ಮೇವು ಬಿಡುವುದು, ಹೆಚ್ಚು ನಾಡಿ ಬಡಿತ, ಉಸಿರಾಟ, ಸಾವಿನ ಸಮಯದಲ್ಲಿ ಮೂಗು, ಬಾಯಿ ಮತ್ತು ಗುದದ್ವಾರದಿಂದ ರಕ್ತಸ್ರಾವವಾಗುತ್ತದೆ. ಇದರ ಹತೋಟಿಗೆ ಪ್ರತಿ ವರ್ಷ ಜುಲೈ/ಆಗಸ್ಟ್ ತಿಂಗಳಲ್ಲಿ ಈ ರೋಗದ ಲಸಿಕೆಯನ್ನು ಕೊಡಿಸಿ ತಡೆಗಟ್ಟಬಹುದು.
- **ಕಾಲುಬಾಯಿ ರೋಗ (ಗೆರಸಲು ರೋಗ) :**ಜ್ವರ ಹೆಚ್ಚಾಗಿ ಬಾಯಿಯಲ್ಲಿ ಗುಳ್ಳೆಗಳು ಕಾಣಿಸಿ, ಇವು ಒಡೆದು ನಾಲಗೆಯ ಮೇಲೆ ಗಾಯಗಳಾಗುತ್ತವೆ. ಇದರ ಹತೋಟಿಗೆ ಮಿಶ್ರತಳಿ ದನಗಳಿಗೆ ಪ್ರತಿ ವರ್ಷ ಎರಡು ಬಾರಿ ಜನವರಿ ಮತ್ತು ಜುಲೈನಲ್ಲಿ ಲಸಿಕೆ ಹಾಕಿಸುವುದು.

ನೋಡಲ್ ಅಧಿಕಾರಿ:
ಕೃ.ವಿ.ವಿ,
ಜಿ.ಕೆ.ವಿ.ಕೆ
ಬೆಂಗಳೂರು